ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಅಧೀಕ್ಷಕ ಅಭಿಯಂತರರು (ವಿದ್ಯುತ್) ಅನೆಕ್ಸ್-3 ಕಟ್ಟಡ, ನೆಲ ಮಹಡಿ, ಎನ್.ಆರ್.ವೃತ್ತ, ಬೆಂಗಳೂರು-560002.

ಸಂಖ್ಯೆ: ಅ.ಅ(ವಿ)/ಪಿಆರ್/ 81 /2024-25 ದಿನಾಂಕ: 09/12/2024

ತಾಂತ್ರಿಕ ಮಂಜೂರಾತಿ ಆದೇಶ

ವಿಷಯ : Providing and installation poles and lights to the Gym equipment area and Play Ground yard in Yelahanka Constituency.

ಉಲ್ಲೇಖ:
1) ಮಾನ್ಯ ಆಡಳಿತಗಾರರು ವಿದ್ಯುತ್ ಯಲಹಂಕ ವಿಭಾಗದ ಕ್ರಿಯಾಯೋಜನೆಯನ್ನು ಅನುಮೋದಿಸಿರುವ ನಡವಳಿಗಳ ವಿಷಯದ ಸಂಖ್ಯೆ:167/2024-25, ದಿನಾಂಕ: 11/09/2024.
2) ಮಾನ್ಯ ಆಯುಕ್ತರ ಕಛೇರಿ ಆದೇಶ ಸಂಖ್ಯೆ: ಬಿ12(1)ಪಿಆರ್/394/21-22, ದಿನಾಂಕ: 27/7/2021.
3) ಆಡಳಿತಾತ್ಮಕ ಮಂಜೂರಾತಿ ಆದೇಶ ಸಂಖ್ಯೆ: ಬಿ.ಬಿ.ಎಂ.ಪಿ/ಕಾ.ಅ/ಯವ/ಆ.ಅ/31 /2024-25, ದಿನಾಂಕ: 08/11/2024

*****

2024-25ನೇ ಸಾಲಿನ ಪಾಲಿಕೆ ಆಯವ್ಯಯದಲ್ಲಿ ವಿದ್ಯುತ್ ಯಲಹಂಕ ವಿಭಾಗಕ್ಕೆ ನಿಗದಿಯಾಗಿರುವ ಅನುದಾನಕ್ಕೆ ಅನುಗುಣವಾಗಿ ಸಿದ್ಧಪಡಿಸಿ ಸಲ್ಲಿಸಲಾಗಿದ್ದ ವಿದ್ಯುತ್ ಕಾಮಗಾರಿಗಳ ಕ್ರಿಯಾಯೋಜನೆಗೆ ಮಾನ್ಯ ಆಡಳಿತಗಾರರು ಉಲ್ಲೇಖ (1) ರಂತೆ ಅನುಮೋದಿಸಿರುತ್ತಾರೆ. ಈ ಮೇರೆಗೆ ಕಾರ್ಯಪಾಲಕ ಅಭಿಯಂತರರು (ವಿದ್ಯುತ್) ಯಲಹಂಕ ಮೇಲಿನ ವಿಷಯದಲ್ಲಿ ತಿಳಿಸಿರುವ ಕಾಮಗಾರಿಗೆ ಪಾಲಿಕೆಯಲ್ಲಿ ಅನುಮೋದನೆಯಾಗಿರುವ ದರಗಳ ಆಧಾರದ ಮೇಲೆ ತಯಾರಿಸಿರುವ ಅಂದಾಜು ಪಟ್ಟಿಗೆ ಉಲ್ಲೇಖ (3)ರಂತೆ ಆಡಳಿತಾತ್ಮಕ ಮಂಜೂರಾತಿ ಆದೇಶ ಹೊರಡಿಸಿರುತ್ತಾರೆ. ಮಾನ್ಯ ಆಯುಕ್ತರು ನಿಯೋಜಿಸಿರುವ ಉಲ್ಲೇಖ (02)ರ ಅಧಿಕಾರ ಪ್ರತ್ಯಾಯೋಜನೆಯಂತೆ ರೂ. 20.00 ಲಕ್ಷಗಳಿಗೆ (Rupees Twenty Lakhs only) ಅನುಮೋದಿತ ದರಗಳ ಆಧಾರದ ಮೇಲೆ ತಯಾರಿಸಿರುವ ಸದರಿ ಕಾಮಗಾರಿಯ ಅಂದಾಜು ಪಟ್ಟಿಯನ್ನು ಪರಿಶೀಲಿಸಿ, ತಾಂತ್ರಿಕ ಮಂಜೂರಾತಿಯ ಪುಸ್ತಕದ ಪುಟ ಸಂಖ್ಯೆ: 1 ರ ಕ್ರಮ ಸಂಖ್ಯೆ: 81 ರಲ್ಲಿ ನಮೂದಿಸಿ ಈ ಕೆಳಗಿನ ಷರತ್ತಿಗೊಳಪಡಿಸಿ ತಾಂತ್ರಿಕ ಮಂಜೂರಾತಿ ನೀಡಲಾಗಿದೆ.

ಈ ಕೆಳಕಂಡ ನಿಬಂಧನೆ/ಷರತ್ತುಗಳನ್ನು ಕಾರ್ಯಪಾಲಕ ಅಭಿಯಂತರರು(ವಿದ್ಯುತ್) ರವರು ಕಡ್ಡಾಯವಾಗಿ ಪಾಲಿಸುವುದು.

1. ಮಾನ್ಯ ಆಯುಕ್ತರವರ ಕಛೇರಿ ಸುತ್ತೋಲೆ ಸಂಖ್ಯೆ: ಆಯುಕ್ತರು/ಪಿಆರ್/176/15-16 ದಿನಾಂಕ: 22.12.2015 ರ ಅದೇಶದ ಮೇರೆಗೆ ಸದರಿ ಕಾಮಗಾರಿಯನ್ನು ಇನ್ಯಾವುದೆ ಅನುದಾನದ ಯೋಜನೆಯಲ್ಲಿ ಕೈಗೆತ್ತಿಗೊಂಡಿರುವುದಿಲ್ಲವೆಂದು ಅಥವಾ ಕಾಮಗಾರಿಗಳು ಪುನಾರವರ್ತಿತವಾಗಿಲ್ಲವೆಂದು ಹಾಗೂ ಈಗಾಗಲೇ ಚಾಲ್ತಿಯಲ್ಲಿರುವ/ಪೂರ್ಣಗೊಂಡಿರುವ ಕಾಮಗಾರಿಗಳು ಅಥವಾ ಲೋಕಾಯುಕ್ತ/ಯಾವುದೇ ಇಲಾಖಾ ವಿಚಾರಣೆ ಹಂತದಲ್ಲಿರುವ ಕಾಮಗಾರಿಗಳು ಸದರಿ ಕ್ರಿಯಾ ಯೋಜನೆಯಲ್ಲಿ ಸೇರ್ಪಡೆಯಾಗಿರುವುದಿಲ್ಲವೆಂದು ಅಥವಾ ಪುನರಾವರ್ತಿತವಾಗಿಲ್ಲವೆಂದು, ಕಾಮಗಾರಿ ಪ್ರಾರಂಭವಾಗುವ ಪೂರ್ವದಲ್ಲೇ ಸಂಬಂಧಪಟ್ಟ ಕಾ.ಪಾ.ಅ/ಸ.ಕಾ.ಪಾ.ಅ/ಸಹಾಯಕ/ ಕಿರಿಯ ಅಭಿಯಂತರರು ಸ್ಥಳ ಪರಿಶೀಲಿಸಿ ದೃಢೀಕರಿಸಿ, ಖಚಿತಪಡಿಸಿಕೊಂಡ ನಂತರವಷ್ಟೆ ಸದರಿ ಕಾಮಗಾರಿಯನ್ನು ಅನುಷ್ಠಾನಗೊಳಿಸುವ ಷರತ್ತಿಗೊಳಪಡಿಸಿದೆ.
2. ಟೆಂಡರ್ ಆಹ್ವಾನಿಸುವ ಮುನ್ನ ಸಂಬಂಧಪಟ್ಟ ಸಮಿತಿಯಿಂದ ಅನುಮೋದನೆ ಪಡೆದು ನಿಯಮಾನುಸಾರ ಕ್ರಮಕೈಗೊಳ್ಳುವುದು.
3. ರೂ. 1.00 ಲಕ್ಷಗಳಿಗಿಂತ ಮೇಲ್ಪಟ್ಟ ಎಲ್ಲಾ ಕಾಮಗಾರಿಗಳನ್ನು ಇ-ಪ್ರೋಕ್ಯೂರ್‌ಮೆಂಟ್ ಮುಖಾಂತರ ಕೈಗೊಳ್ಳುವುದು.
4. ದರಪಟ್ಟಿ ಆಧಾರಿತವಲ್ಲದ ಅಂಶಗಳಿಗೆ ಡೆಟಾ ದರವನ್ನು ತಯಾರಿಸಿ ಅನುಮೋದನೆ ಪಡೆಯುವುದು.

5. ಕರ್ನಾಟಕ ಸರ್ಕಾರ ಆದೇಶ ಸಂಖ್ಯೆ: ಆಇ 876 (ಪಿ–1) ವೆಚ್ಚ–12/17, ದಿನಾಂಕ: 12/10/2017ರಂತೆ ಕಡ್ಡಾಯವಾಗಿ ರೂ. 50.00 ಲಕ್ಷಗಳನ್ನು ಮೀರದ ಕಾಮಗಾರಿಗಳಿಗೆ ಟೆಂಡರ್ ಆಹ್ವಾನಿಸುವ ಸಮಯದಲ್ಲಿRandomization ಮೂಲಕ ಕಾಮಗಾರಿಗಳ ಪರಿಶಿಷ್ಠ ಜಾತಿ/ಪರಿಶಿಷ್ಠ ಪಂಗಡದವರಿಗೆ ಮೀಸಲಿಡುವ ಸಂಬಂಧ ನಿಯಮಾನುಸಾರ ಅಗತ್ಯ ಕ್ರಮ ಕೈಗೊಳ್ಳುವುದು.
6. ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕ ಅಧಿನಿಯಮ–1999 ಮತ್ತು ನಿಯಮ–2000 ಹಾಗೂ ಸರ್ಕಾರ ನಿಗಧಿಪಡಿಸಿರುವStandard Bidding Documents ಅನ್ನು ಅಳವಡಿಸಿಕೊಂಡು ನಿರ್ವಹಿಸುವುದು ಹಾಗೂ ಕಾಮಗಾರಿಗೆ ಟೆಂಡರ್ ಆಹ್ವಾನಿಸುವಾಗ Stander Tender Document KW 1/2/3/4 ಹಾಗೂ ಅಗಿಂದಾಗ್ಗೆ ಹೊರಡಿಸುವ ತಿದ್ದುಪಡಿಗಳನ್ನು ಅಳವಡಿಸಿಕೊಂಡು ಟೆಂಡರ್ ಆಹ್ವಾನಿಸತಕ್ಕದ್ದು.
7. ಇಡಿಗಂಟು (Lumpsum/Miscellaneous Amount) ವೆಚ್ಚದ ಸಮಯದಲ್ಲಿ ಸಕ್ಷಮ ಪ್ರಾಧಿಕಾರದಿಂದ ಅನುಮೋದನೆ ಪಡೆಯುವುದು.
8. ಸಕ್ಷಮ ಪ್ರಾಧಿಕಾರದಿಂದ ಕರಡು ಟೆಂಡರ್ ಪ್ರತಿಯನ್ನು ಅನುಮೋದನೆ ಪಡೆಯುವುದು.
9. ಕೆಲಸದ ಸ್ಥಳದಿಂದ ಸಾಗಣೆ ದೂರಕ್ಕೆ ಅನುಮೋದನೆ ಪಡೆಯುವುದು.
10. ಅಂದಾಜು ಪಟ್ಟಿಯಲ್ಲಿ ಮಾರುಕಟ್ಟೆ ದರ ಅಳವಡಿಸಿಕೊಂಡಿರುವ ಅಂಶಗಳಿಗೆ ಕೋಟೆಷನ್ ಕರೆದು ಅನುಮೋದನೆ ಪಡೆಯುವುದು.
11. ನಿಗದಿತ ಅವಧಿಯೊಳಗೆ ಕಾಮಗಾರಿಯನ್ನು ಪೂರ್ಣಗೊಳಿಸುವುದು. ಸಾಧ್ಯವಾಗದ ಪಕ್ಷದಲ್ಲಿ ಕಾಲಾವಧಿ ವಿಸ್ತರಣೆಯನ್ನು ಸೂಕ್ತ ಸಮಜಾಯಿಷಿಯೊಂದಿಗೆ/ವಿವರವಾದ ಸಮಂಜಸ ವರದಿ ನೀಡಿ ಕಾಲಾವಧಿ ವಿಸ್ತರಣೆ ಪಡೆಯುವುದು.
12. ಸದರಿ ಕೈಗೊಳ್ಳುವ ಕಾಮಗಾರಿಯು ಪುನರಾವರ್ತನೆ ಅಥವಾ ನಕಲು ಆಗಿರುವುದಿಲ್ಲವೆಂಬ ಬಗ್ಗೆ ಸಂಬಂಧಪಟ್ಟ ಅಭಿಯಂತರರು ಟಿಪ್ಪಣಿ ಹಾಳೆಯಲ್ಲಿ ಹಾಗೂ ಅಂದಾಜು ಪಟ್ಟಿಯಲ್ಲಿ ದೃಢೀಕರಿಸುವುದು.
13. ಅಂದಾಜುಪಟ್ಟಿಯ ಮೊತ್ತವು ಮಂಜೂರಾತಿಯಾದ ಮೊತ್ತಕ್ಕಿಂತ ಮೀರಬಾರದು, ಹಾಗೂ ಕಾಮಗಾರಿಗೆ ಮಂಜೂರಾದ ಮೊತ್ತದ ಹಣವನ್ನು ಅದೇ ಕಾಮಗಾರಿಗೆ ಉಪಯೋಗಿಸತಕ್ಕದ್ದು.
14. ತೆರವುಗೊಳಿಸಿರುವ ಉಪಯುಕ್ತ ಸಾಮಾಗ್ರಿಗಳ ಬಗ್ಗೆ ದಾಸ್ತಾನು ವಹಿಯಲ್ಲಿ ದಾಖಲಿಸುವುದು ಹಾಗೂ ಈ ತರಹದ ಉಪಯುಕ್ತ ಸಾಮಾಗ್ರಿಗಳನ್ನು ಬೇರೆಡೆ ಉಪಯೋಗಿಸಿರುವ (ಮರು ಬಳಕೆ ಮಾಡಿರುವ) ಬಗ್ಗೆ ಪ್ರತ್ಯೇಕ ವಹಿಯಲ್ಲಿ ದಾಖಲಿಸಿ ದೃಢೀಕರಿಸಿಕೊಳ್ಳುವುದು.
15. ಮೇಲಾಧಿಕಾರಿಗಳಿಗೆ ಮಾಹಿತಿ ಒದಗಿಸುವಲ್ಲಿ ಮರೆಮಾಚಿದಲ್ಲಿ ಹಾಗೂ ಅಂದಾಜು ಪಟ್ಟಿ ತಯಾರಿಸುವಲ್ಲಿ ಯಾವುದಾದರೂ ಲೋಪದೋಷಗಳು ಕಂಡು ಬಂದಲ್ಲಿ ಸಂಬಂಧಪಟ್ಟ ಕಿರಿಯ/ಸಹಾಯಕ ಅಭಿಯಂತರರು (ವಿ)/ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು(ವಿ)/ ಕಾರ್ಯಪಾಲಕ ಅಭಿಯಂತರರನ್ನು(ವಿ) ನೇರ ಜವಾಬ್ದಾರರನ್ನಾಗಿ ಮಾಡಲಾಗುವುದು.
16. ಕಾಮಗಾರಿಯ ಗುಣಮಟ್ಟವನ್ನು ಕಾಯ್ದಿರಿಸುವ ಬಗ್ಗೆ ಸಂಬಂಧಪಟ್ಟ ಕಿರಿಯ/ಸಹಾಯಕ ಅಭಿಯಂತರರು (ವಿ)/ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು(ವಿ)/ಕಾರ್ಯಪಾಲಕ ಅಭಿಯಂತರರನ್ನು(ವಿ) ನೇರ ಜವಾಬ್ದಾರರನ್ನಾಗಿ ಮಾಡಲಾಗುವುದು.

ಅಧೀಕ್ಷಕ ಅಭಿಯಂತರರು (ವಿದ್ಯುತ್)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಪ್ರತಿಯನ್ನು:

1. ಕಾರ್ಯಪಾಲಕ ಅಭಿಯಂತರರು (ವಿದ್ಯುತ್–ಯಲಹಂಕ) ರವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ ರವಾನಿಸಿದೆ.
2. ಕಛೇರಿ ಕಡತಕ್ಕೆ